**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 715/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.03**

**ದಿನಾಂಕಃ 14.11.2025** **ಸಿಡಬ್ಲ್ಯೂ.09**

| | |
|---|---|
| ಹೆಸರು | ರವಿಕುಮಾರ ಡಿ |
| ತಂದೆ ಹೆಸರು | ಡಿಳ್ಳೆಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ಪಿ ಎಸ್ ಐ |
| ವಾಸ ಸ್ಥಳ | ಹಾವೇರಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ದಿಃ 19.08.2021 ರಿಂದ 2023 ರ ಜನೇವರಿ ವರೆಗೆ ಪಿ ಎಸ್ ಐ ಆಗಿ ಮಲೆಬೆನ್ನೂರು ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 29.07.2022 ರಂದು ಪ್ರಕರಣದ ಕಡತವನ್ನು ಚಾಸಾ.8 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ ಆರೋಪಿತರು ನ್ಯಾಯಾಲಯದಿಂದ ಜಾಮೀನು ಪಡೆದು ಹಾಜರಾಗಿದ್ದು ಜಾಮೀನಿನ ಪ್ರಕ್ರಿಯೆ ಅನುಸರಿಸಿ ಬಿಡುಗಡೆ ಮಾಡಿರುತ್ತೇನೆ.

ದಿಃ 30.12.2022 ರಂದು ಆರೋಪಿತರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. 1 ರಿಂದ 3 ನೇ ಆರೋಪಿತರು ಈಗ ನ್ಯಾಯಾಲಯದಲ್ಲಿ ಇದ್ದಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ ಸಿ ವಕೀಲರಿಂದಃ**

ನಾನು ದೋಷಾರೋಪಣ ಪಟ್ಟಿ ಸಲ್ಲಿಸುವ ಸಂದರ್ಭದಲ್ಲಿ ನಿಪಿ.1 ದೂರನ್ನು ಪರಿಶೀಲಿಸಿದ್ದೇನೆ ಎಂದರೆ ಸರಿ. ಚಾಸಾ.8 ರವರು ಕೂಲಂಕುಷವಾಗಿ ತನಿಖೆ ಮಾಡದೇ ಪ್ರಕರಣದ ಕಡತವನ್ನು ನನಗೆ ನೀಡಿದ್ದು ಸದರಿ ಕಡತದ ಆಧಾರದ ಮೇಲೆ ನಾನು ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರನ್ನು ನಾನು ಇದೇ ದಿನ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರೂ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ